Akashvani : Bengaluru
National Bulletin In Kannada
05.09.2025 : 7.35pm
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**ಮುಖ್ಯಾಂಶಗಳು**

1. ಜಿಎಸ್‌ಟಿ ಸುಧಾರಣೆ, ಸ್ವಾತಂತ್ರ್ಯ ನಂತರದ ಭಾರತದ ಅತಿದೊಡ್ಡ ಆರ್ಥಿಕ ಸುಧಾರಣೆ - ಪ್ರಧಾನಿ ನರೇಂದ್ರ ಮೋದಿ

2. ದೇಶಾದ್ಯಂತ ಇಂದು ಶಿಕ್ಷಕರ ದಿನ ಆಚರಣೆ; ನವದೆಹಲಿಯಲ್ಲಿಂದು ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿಗಳನ್ನು ಪ್ರದಾನ ಮಾಡಲಿರುವ ರಾಷ್ಟ್ರಪತಿ

3. ಐರೋಪ್ಯ ಸಮಿತಿ ಮತ್ತು ಐರೋಪ್ಯ ಆಯೋಗದ ಅಧ್ಯಕ್ಷರೊಂದಿಗೆ ಪ್ರಧಾನಿ ದೂರವಾಣಿ ಸಂಭಾಷಣೆ

4. ಏಷ್ಯಾ ಕಪ್ ಹಾಕಿ: ಮಲೇಷ್ಯಾ ವಿರುದ್ಧ ಭಾರತಕ್ಕೆ ಭರ್ಜರಿ ಜಯ

><><><><><><

ಸರಕು ಮತ್ತು ಸೇವಾ ತೆರಿಗೆ - ಜಿಎಸ್‌ಟಿ ಸುಧಾರಣೆ, ಸ್ವಾತಂತ್ರ್ಯ ನಂತರದ ಭಾರತದ ಅತಿದೊಡ್ಡ ಆರ್ಥಿಕ ಸುಧಾರಣೆ ಎಂದು ಪ್ರಧಾನಿ ನರೇಂದ್ರ ಮೋದಿ ಬಣ್ಣಿಸಿದ್ದಾರೆ. ನವದೆಹಲಿಯಲ್ಲಿ ನಿನ್ನೆ ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿ ವಿಜೇತರೊಂದಿಗೆ ನಡೆಸಿದ ಸಂವಾದದಲ್ಲಿ ಪ್ರಧಾನಿ, ಈಗ ಜಿಎಸ್‌ಟಿ ಹೆಚ್ಚು ಸರಳಗೊಂಡಿದೆ. ಇದರಿಂದ ಮಧ್ಯಮ ವರ್ಗ, ನವಮಧ್ಯಮ ವರ್ಗ, ಬಡವರ ಜೊತೆಗೆ ಯುವಜನತೆ ಮತ್ತು ಮಹಿಳೆಯರೂ ಸಹ ಲಾಭಪಡೆಯಬಹುದಾಗಿದೆ. ಇಂದಿನ ಜಾಗತಿಕ ಪರಿಸ್ಥಿತಿಯಲ್ಲಿ ಭಾರತ ತನ್ನ ಯೋಗ್ಯ ಸ್ಥಾನವನ್ನು ಪಡೆಯಲು ಸಮಯೋಚಿತ ಬದಲಾವಣೆಗಳು ಅಗತ್ಯವಾಗಿವೆ ಎಂದರು. ಸರಳವಾದ ತೆರಿಗೆ ವ್ಯವಸ್ಥೆ, ನಾಗರಿಕರ ಜೀವನಮಟ್ಟದ ಉನ್ನತ್ತೀಕರಣ, ಖರ್ಚು ಮತ್ತು ಆರ್ಥಿಕ ಬೆಳವಣಿಗೆಗೆ ಉತ್ತೇಜನ, ಹೂಡಿಕೆ ಮತ್ತು ಉದ್ಯೋಗ ಸೃಷ್ಟಿಗೆ ಸಹಾಯ ಮಾಡುವ ``ಈಸ್ ಆಫ್ ಡೂಯಿಂಗ್ ಬಿಸಿನೆಸ್'', ಹಾಗೂ ಸಮನ್ವಯ ಸಹಕಾರ ಮಾದರಿಯ ಮೂಲಕ ಅಭಿವೃದ್ಧಿಶೀಲ ಭಾರತದ ದೃಷ್ಟಿಕೋನವನ್ನು ಬಲಪಡಿಸುವ "ಪಂಚ ರತ್ನ" ಎಂಬ ಐದು ಅಂಶಗಳನ್ನು ಈ ಜಿಎಸ್‌ಟಿ ಸುಧಾರಣೆಯು ಒಳಗೊಂಡಿದೆ ಎಂದು ಪ್ರಧಾನಿ ತಿಳಿಸಿದರು. ಇದೇ ವೇಳೆ, ಬಲಿಷ್ಠ ರಾಷ್ಟ್ರ ಮತ್ತು ಸಶಕ್ತ ಸಮಾಜವನ್ನು ನಿರ್ಮಿಸಲು ಶಿಕ್ಷಕರೇ ಆಧಾರಸ್ತಂಭ ಎಂದ ಅವರು, ವಿದ್ಯಾರ್ಥಿಗಳೊಂದಿಗೆ ಜೊತೆಗೂಡಿ ಸ್ವದೇಶಿ ಉತ್ಪನ್ನಗಳ ಪ್ರಚಾರ ಮಾಡುವ ಅಭಿಯಾನಕ್ಕೆ ನೇತೃತ್ವ ವಹಿಸಿ ಎಂದು ಶಿಕ್ಷಕರಿಗೆ ಕರೆ ನೀಡಿದರು. ಶಾಲೆಗಳು ಈ ರೀತಿಯ ಕಾರ್ಯಚಟುವಟಿಕೆಗಳಿಗೆ `ಸ್ವದೇಶಿ ದಿನ' ಅಥವಾ `ಸ್ವದೇಶಿ ವಾರ' ಎಂಬಾಗಿ ಆಚರಿಸಬೇಕು ವಿದ್ಯಾರ್ಥಿಗಳು ತಮ್ಮ ಮನೆಗಳಿಂದ ಸ್ಥಳೀಯವಾಗಿ ತಯಾರಾದ ಉತ್ಪನ್ನಗಳನ್ನು ತರಬೇಕು ಮತ್ತು ಅದರ ಹಿಂದಿನ ಕಥೆಗಳನ್ನು ಹಂಚಿಕೊಳ್ಳಬೇಕು ಎಂದು ಸಲಹೆ ನೀಡಿದ್ದಾರೆ. ವಿದ್ಯಾರ್ಥಿಗಳು ಗ್ರಾಮಗಳಲ್ಲಿ ಸ್ವದೇಶಿ ಪರಿಕಲ್ಪನೆ ಉತ್ತೇಜಿಸುವ ಭಿತ್ತಿಪತ್ರಗಳೊಂದಿಗೆ ಮೆರವಣಿಗೆಗಳಲ್ಲಿ ಭಾಗವಹಿಸಬಹುದು. ಇವು ದೇಶೀಯ ಉತ್ಪನ್ನಗಳ ಬಳಕೆಗೆ ಪ್ರೋತ್ಸಾಹ ನೀಡುವಂತಹ ವಾತಾವರಣವನ್ನು ಸೃಷ್ಟಿಸಲಿದೆ. ಪ್ರತಿ ವಿದ್ಯಾರ್ಥಿಯಲ್ಲಿಯೂ ಆತ್ಮನಿರ್ಭರತೆಯ ಬೀಜ ಬಿತ್ತುವುದು ಶಿಕ್ಷಕರ ಕರ್ತವ್ಯ ಎಂದು ಪ್ರಧಾನಿ ಹೇಳಿದರು.

><><><><><><

ಇಂದು ಮಾಜಿ ರಾಷ್ಟ್ರಪತಿ ಸರ್ವಪಲ್ಲಿ ರಾಧಾಕೃಷ್ಣ ಅವರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ದೇಶಾದ್ಯಂತ ಶಿಕ್ಷಕರ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ನವದೆಹಲಿಯ ವಿಜ್ಞಾನ ಭವನದಲ್ಲಿ ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿಗಳನ್ನು ಪ್ರದಾನ ಮಾಡುವರು. ಈ ವಾರ್ಷಿಕ ಪ್ರಶಸ್ತಿಯನ್ನು ದೇಶದ ವಿಭಿನ್ನ ಭಾಗಗಳಿಂದ ಆಯ್ಕೆಗೊಂಡ ಅತ್ಯುತ್ತಮ ಶಿಕ್ಷಕರ ಸೇವೆ, ನಿಷ್ಠೆ ಮತ್ತು ಶೈಕ್ಷಣಿಕ ಕ್ಷೇತ್ರದಲ್ಲಿ ತಂದಿರುವ ಉನ್ನತ ಮಟ್ಟದ ಪರಿವರ್ತನೆಯನ್ನು ಗುರುತಿಸುವ ಉದ್ದೇಶದಿಂದ ನೀಡಲಾಗುತ್ತದೆ. ಈ ಪ್ರಶಸ್ತಿಗೆ ಪಾತ್ರರಾದ ಶಿಕ್ಷಕರು ತಮ್ಮ ವಿದ್ಯಾರ್ಥಿಗಳ ಜೀವನದಲ್ಲಿ ಸಕಾರಾತ್ಮಕ ಬದಲಾವಣೆ ತರಲು ಸಲ್ಲಿಸಿದ ಪರಿಶ್ರಮಕ್ಕಾಗಿ ಸ್ಮರಣೀಯರಾಗಿದ್ದಾರೆ. ಶಿಕ್ಷಣ ಕ್ಷೇತ್ರದಲ್ಲಿ ಶ್ರೇಷ್ಠತೆಯನ್ನು ಪ್ರೋತ್ಸಾಹಿಸುವ ಈ ಪ್ರಶಸ್ತಿ, ದೇಶದಾದ್ಯಂತ ಶಿಕ್ಷಕರಿಗೆ ಪ್ರೇರಣೆಯ ಮೂಲವಾಗಿದೆ.

><><><><><><

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಿನ್ನೆ ಐರೋಪ್ಯ ಸಮಿತಿ ಅಧ್ಯಕ್ಷ ಅಂಟೋನಿಯೋ ಕೋಸ್ಟಾ ಮತ್ತು ಐರೋಪ್ಯ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್‌ಡೆರ್ ಲೆಯೆನ್ ಅವರೊಂದಿಗೆ ಜಂಟಿ ದೂರವಾಣಿ ಸಂಭಾಷಣೆ ನಡೆಸಿದರು. ಈ ವೇಳೆ ನಾಯಕರು ಜಾಗತಿಕ ಸಮಸ್ಯೆಗಳನ್ನು ಪರಿಹರಿಸಲು, ಸ್ಥಿರತೆ ಹೆಚ್ಚಿಸಲು ಮತ್ತು ಪರಸ್ಪರ ಹಿತಾಸಕ್ತಿಗಾಗಿ ನಿಯಮಾಧಾರಿತ ಅಂತರರಾಷ್ಟ್ರೀಯ ವ್ಯವಸ್ಥೆಯನ್ನು ಉತ್ತೇಜಿಸುವಲ್ಲಿ ಭಾರತ-ಐರೋಪ್ಯ ಒಕ್ಕೂಟದ ನಡುವಿನ ಕಾರ್ಯತಂತ್ರದ ಪಾಲುದಾರಿಕೆಯ ಪಾತ್ರದ ಕುರಿತು ಒತ್ತಿ ಹೇಳಿದರು. ಜಗತ್ತಿನ ಅತಿದೊಡ್ಡ ಪ್ರಜಾಪ್ರಭುತ್ವ ಶಕ್ತಿಗಳಾಗಿರುವ ಭಾರತ ಮತ್ತು ಯುರೋಪ್ ವಿಶ್ವಾಸ, ಹಂಚಿಕೆಯ ಮೌಲ್ಯಗಳು ಮತ್ತು ಭವಿಷ್ಯದ ದೃಷ್ಟಿಕೋನದ ಆಧಾರದಲ್ಲಿ ಬಲವಾದ ಸಂಬಂಧವನ್ನು ಹಂಚಿಕೊಂಡಿವೆ ಎಂದು ಪ್ರಧಾನಮಂತ್ರಿ ಕಚೇರಿ ಹೇಳಿಕೆಯಲ್ಲಿ ತಿಳಿಸಿದೆ. ವ್ಯಾಪಾರ, ತಂತ್ರಜ್ಞಾನ, ಹೂಡಿಕೆ, ನಾವೀನ್ಯತೆ, ಸುಸ್ಥಿರತೆ, ರಕ್ಷಣಾ ಸಹಕಾರ, ಭದ್ರತೆ ಮತ್ತು ಸರಬರಾಜು ಸರಪಳಿ ಸ್ಥಿರತೆ ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಂಬಂಧಗಳಲ್ಲಾಗುತ್ತಿರುವ ಅಭಿವೃದ್ಧಿಯನ್ನು ನಾಯಕರು ಸ್ವಾಗತಿಸಿದರು. ಭಾರತ-ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದದ ಕುರಿತ ಮಾತುಕತೆಗಳನ್ನು ಶೀಘ್ರದಲ್ಲೇ ಪೂರ್ಣಗೊಳಿಸುವ ಮತ್ತು ಭಾರತ-ಮಧ್ಯಪೂರ್ವ-ಯುರೋಪ್ ಕಾರಿಡಾರ್ ಜಾರಿಗೆ ತರುವ ಬದ್ಧತೆಯನ್ನು ನಾಯಕರು ಪುನರುಚ್ಚರಿಸಿದರು. ಇದೇ ವೇಳೆ ಅವರು, ಉಕ್ರೇನ್ ಯುದ್ಧ ಕೊನೆಗಾಣಿಸುವ ಪ್ರಯತ್ನಗಳ ಕುರಿತು ಹಾಗೂ ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯ ವಿನಿಮಯ ಮಾಡಿಕೊಂಡರು. ಪ್ರಧಾನಮಂತ್ರಿ ನರೇಂದ್ರ ಮೋದಿ, ಉಕ್ರೇನ್ ಯುದ್ಧದ ಶಾಂತಿಯುತ ಪರಿಹಾರಕ್ಕೆ ಭಾರತ ನೀಡುತ್ತಿರುವ ನಿರಂತರ ಬೆಂಬಲವನ್ನು ಪುನರುಚ್ಚರಿಸಿ, ಶಾಂತಿ ಮತ್ತು ಸ್ಥಿರತೆಯ ಮರುಸ್ಥಾಪನೆಯ ಅಗತ್ಯವನ್ನು ಒತ್ತಿಹೇಳಿದರು.

><><><><><><

ಇAದು ದೇಶಾದ್ಯಂತ ಕೇರಳಿಗರು ತಿರು ಓಣಂ ಹಬ್ಬವನ್ನು ಆಚರಿಸುತ್ತಿದ್ದಾರೆ. ತಿರು ಓಣಂ ಕೇರಳದಲ್ಲಿ ಅತಿ ದೊಡ್ಡ ಹಬ್ಬವಾಗಿದ್ದು, ಜಾತಿ ಮತ್ತು ಧರ್ಮವನ್ನು ಮೀರಿ ಆಚರಿಸಲಾಗುವ ಈ ಹಬ್ಬ 11 ದಿನಗಳ ಹಿಂದೆ ಅತ್ತಂ ಹಬ್ಬದೊಂದಿಗೆ ಪ್ರಾರಂಭವಾಗುತ್ತದೆ. ಈ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸಮಸ್ತ ಜನತೆಗೆ, ವಿಶೇಷವಾಗಿ ಕೇರಳ ಜನತೆಗೆ ಹಬ್ಬದ ಶುಭಾಶಯಗಳನ್ನು ಕೋರಿದ್ದಾರೆ. ಓಣಂ ಕೇರಳದ ಶ್ರೀಮಂತ ಸಾಂಸ್ಕøÀತಿಕ ಪರಂಪರೆ ಮತ್ತು ಸಂಪ್ರದಾಯದ ವಿಶಿಷ್ಟ ಉದಾಹರಣೆಯಾಗಿದ್ದು, ದೇಶದ ರೈತರಿಗೆ ಕೃತಜ್ಞತೆ ಸಲ್ಲಿಸುವ ಒಂದು ಸಂದರ್ಭವಾಗಿದೆ ಎಂದು ರಾಷ್ಟ್ರಪತಿ ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ. ಇನ್ನು ಓಣಂ ಸಲುವಾಗಿ ಕೇರಳದಾದ್ಯಂತ ಕೆಲವು ಸಂಸ್ಥೆಗಳು, ಸಾಂಸ್ಕೃತಿಕ ಸಂಸ್ಥೆಗಳು ಮತ್ತು ಸ್ಥಳೀಯ ಸಮುದಾಯಗಳು ಸಾಂಸ್ಕೃತಿಕ ಕಾರ್ಯಕ್ರಮಗಳು, ಸಾಂಪ್ರದಾಯಿಕ ಕ್ರೀಡಾ ಚಟುವಟಿಕೆಗಳನ್ನು ಆಯೋಜಿಸುತ್ತಿವೆ. ಇನ್ನು ಕೇರಳದ ಪ್ರಸಿದ್ದ ದೇಗುಲಗಳಾದ ಶಬರಿಮಲೆ, ಗುರುವಾಯೂರ್ ಸೇರಿದಂತೆ ಪ್ರಮುಖ ದೇವಾಲಯಗಳಲ್ಲಿ ಇಂದು ವಿಶೇಷ ಪೂಜೆಗಳು ನಡೆಯುತ್ತಿವೆ.

><><><><><><

ಪ್ರವಾದಿ ಹಜ್ರತ್ ಮೊಹಮ್ಮದ್ ಅವರ ಜನ್ಮದಿನವಾದ ಮಿಲಾದ್-ಉನ್-ನಬಿ, ಅನ್ನು ದೇಶದ ವಿವಿಧ ಭಾಗಗಳಲ್ಲಿ ಇಂದು ಮುಸ್ಲಿಂ ಬಾಂಧವರಿAದ ಭಕ್ತಿಭಾವದೊಂದಿಗೆ ಆಚರಿಸಲಾಗುತ್ತಿದೆ. ಈ ಸಂದರ್ಭದ ಅಂಗವಾಗಿ "ಮಿಲಾದ್ ಮೆಹ್ಫಿಲ್" ಮತ್ತು "ಸೀರತ್ ಸಮ್ಮೇಳನಗಳು" ನಡೆಯುತ್ತಿದ್ದು, ಅವುಗಳಲ್ಲಿ ಪ್ರವಾದಿ ಮೊಹಮ್ಮದ್ ಅವರ ಜೀವನಚರಿತ್ರೆ ಹಾಗೂ ಉಪದೇಶಗಳ ಬಗ್ಗೆ ಬೆಳಕು ಚೆಲ್ಲಲಾಗುತ್ತಿದೆ. ಮಿಲಾದ್ ಮೆರವಣಿಗೆಗಳು ಸಹ ವಿವಿಧ ನಗರ ಮತ್ತು ಪಟ್ಟಣಗಳಲ್ಲಿ ಆಯೋಜಿಸಲ್ಪಟ್ಟಿವೆ, ಜನತೆ ಉತ್ಸಾಹದಿಂದ ಭಾಗವಹಿಸುತ್ತಿದ್ದಾರೆ.

><><><><><><

ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದರ್ ಯಾದವ್ ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳನ್ನು ಶ್ಲಾಘಿಸಿದ್ದು, ಅವುಗಳನ್ನು ಹಸಿರು ಭಾರತಕ್ಕಾಗಿ ಸುಧಾರಣೆಗಳು ಎಂದು ಕರೆದಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಜಿಎಸ್‌ಟಿ ಕುರಿತಾಗಿ ಹಂಚಿಕೊಂಡಿರುವ ಭೂಪೇಂದರ್ ಯಾದವ್ ಜಿಎಸ್‌ಟಿ ಏಕರೂಪಗೊಳಿಸುವಿಕೆ, ನವೀಕರಿಸಬಹುದಾದ ಇಂಧನವನ್ನು ಭಾರತದ ಹವಾಮಾನ ಕಾರ್ಯತಂತ್ರದ ಬೆನ್ನೆಲುಬಾಗಿ ಉಳಿಸಿದೆ ಎಂದು ಹೇಳಿದ್ದಾರೆ.

><><><><><><

ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆಯು ಸಾರ್ವಜನಿಕ ವಿತರಣಾ ಕಾರ್ಯಾಚರಣೆಗಳ ಕುರಿತ ರಾಷ್ಟ್ರಮಟ್ಟದ ಮೌಲ್ಯಮಾಪನ ವರದಿಯನ್ನು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರಿಗೆ ಸಲ್ಲಿಸಿದೆ. 112 ಮಹಾತ್ವಾಕಾಂಕ್ಷಿ ಜಿಲ್ಲೆಗಳಲ್ಲಿ ಈ ಮೌಲ್ಯಮಾಪನ ನಡೆಸಲಾಗಿದ್ದು, ಸಂಗ್ರಹಣೆ ಮತ್ತು ಕುಂದುಕೊರತೆ ಪರಿಹಾರ ಸೇರಿದಂತೆ ಸಾರ್ವಜನಿಕ ವಿತರಣಾ ವ್ಯವಸ್ಥೆಯ ಪ್ರಮುಖ ಅಂಶಗಳನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ. ಈ ಸಚಿವಾಲಯದ ಪ್ರಕಾರ, 277 ನ್ಯಾಯ ಬೆಲೆ ಅಂಗಡಿಗಳನ್ನು ಒಳಗೊಂಡಿದ್ದು ಜೊತೆಗೆ ಡಿಪೋಗಳು, ಖರೀದಿ ಕೇಂದ್ರಗಳಿಗೆ ಭೇಟಿ ನೀಡುವುದು ಮತ್ತು ಫಲಾನುಭವಿಗಳ ಕುಂದುಕೊರತೆ, ಅರ್ಜಿದಾರರೊಂದಿಗಿನ ಸಂವಹನಗಳನ್ನು ಈ ಮೌಲ್ಯಮಾಪನ ಒಳಗೊಂಡಿತ್ತು.

><><><><><><

ರಾಜಗಿರ್ ಅಂತರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆದ ಏಷ್ಯಾ ಕಪ್ ಹಾಕಿ ಚಾಂಪಿಯನ್‌ಷಿಪ್‌ನ ಸೂಪರ್ 4 ಹಂತದ ಪಂದ್ಯದಲ್ಲಿ ಭಾರತ, ಮಲೇಶಿಯಾವನ್ನು 4-1 ಗೋಲುಗಳಿಂದ ಸೋಲಿಸಿದೆ. ಮನಪ್ರೀತ್ ಸಿಂಗ್, ಸುಖಜೀತ್ ಸಿಂಗ್, ಶಿಲಾನಂದ್ ಲಕ್ರಾ ಮತ್ತು ವಿವೇಕ್ ಸಾಗರ್ ಪ್ರಸಾದ್ ತಲಾ ಒಂದು ಗೋಲು ಗಳಿಸಿ ತಂಡದ ಗೆಲುವಿನಲ್ಲಿ ಮಹತ್ವದ ಪಾತ್ರವಹಿಸಿದರು.

><><><><><><